ಮಂಗಳೂರು ವಿಶ್ವವಿದ್ಯಾನಿಲಯ

ಕ್ರಮಾಂಕ: ಎಂಯು/ಎಸಿಸಿ/ಸಿಆರ್.5/2021-22/ಎ4

ಕುಲಸಚಿವರ ಕಚೇರಿ
ಮಂಗಳಗಂಗೋತ್ರಿ - 574 199
ದಿನಾಂಕ: 01/02/2022

## ಪ್ರಕಟಣೆ

ವಿಷಯ: ಶೈಕ್ಷಣಿಕ ವರ್ಷ 2021-22ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರವೇಶಾತಿಗೆ ಅರ್ಜಿ ಆಹ್ವಾನಿಸುವ ಬಗ್ಗೆ.

~~~~~~~~~

ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಶೈಕ್ಷಣಿಕ ವರ್ಷ 2020-21ನೇ ಸಾಲಿನಲ್ಲಿ ವಿವಿಧ ಪದವಿ ಕಾರ್ಯಕ್ರಮಗಳಿಗೆ ನಡೆಸಲಾದ ಪರೀಕ್ಷೆಗಳ ಫಲಿತಾಂಶ ವಿಳಂಬವಾಗಿ ಪ್ರಕಟವಾದ ಹಾಗೂ ವಿಶೇಷ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷ 2021-22ನೇ ಸಾಲಿನಲ್ಲಿ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಪ್ರವೇಶಾತಿಗೊಳ್ಳಲು ಅನುಕೂಲವಾಗುವಂತೆ ವಿಶ್ವವಿದ್ಯಾನಿಲಯ ಆವರಣ, ಮಂಗಳಗಂಗೋತ್ರಿ/ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು/ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು/ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ/ಜ್ಞಾನ ಕಾವೇರಿ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳು (ಸರಕಾರಿ ಕೋಟಾದ ಸೀಟುಗಳಿಗೆ) ಮತ್ತು ಸರಕಾರಿ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರವೇಶಾತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ 07/02/2022 ಆಗಿರುತ್ತದೆ.

ಸೂಚನೆ:

1. ಪ್ರವೇಶಾತಿ ಅರ್ಜಿ ಮತ್ತು ಕೈಪಿಡಿಯನ್ನು ಮಂಗಳೂರು ವಿಶ್ವವಿದ್ಯಾನಿಲಯ ಆವರಣ/ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು/ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ/ ಜ್ಞಾನಕಾವೇರಿ ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ ಅಥವಾ ಮಂಗಳೂರು ವಿಶ್ವವಿದ್ಯಾನಿಲಯದ ಜಾಲತಾಣ. www.mangaloreuniversity.ac.in ನಿಂದ ಪಡೆದುಕೊಳ್ಳುವುದು.
2. ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳ ಸರಕಾರಿ ಕೋಟಾದ ಸೀಟುಗಳಿಗೆ (ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳಿಗೆ ಮಾತ್ರ) ಅರ್ಜಿಗಳನ್ನು ನೀಡಲಾಗುವುದು.
3. ಸರಕಾರಿ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳಿಗೆ ಸೇರಲು ಇಚ್ಛಿಸುವ ವಿದ್ಯಾರ್ಥಿಗಳು ಸಂಬಂಧಪಟ್ಟ ಸರಕಾರಿ ಕಾಲೇಜುಗಳಿಂದ ಅರ್ಜಿಗಳನ್ನು ಪಡೆದು ನಿಗದಿತ ಸಮಯದೊಳಗೆ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರಿಗೆ ಸಲ್ಲಿಸುವುದು.
4. ಶೈಕ್ಷಣಿಕ ವರ್ಷ 2020-21ನೇ ಸಾಲಿನಲ್ಲಿ ವಿವಿಧ ಪದವಿ ಕಾರ್ಯಕ್ರಮಗಳಿಗೆ ನಡೆಸಲಾದ ಪರೀಕ್ಷೆಗಳಲ್ಲಿ ಫಲಿತಾಂಶ ವಿಳಂಬವಾಗಿ ಪ್ರಕಟವಾದ ಹಾಗೂ ವಿಶೇಷ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಆಯಾಯ ವಿಭಾಗಗಳಿಗೆ ಈಗಾಗಲೇ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ (Merit List/Payment List) ಅರ್ಹತಾ ಪಟ್ಟಿಯಲ್ಲಿ ಕಟ್ ಆಫ್ ಅಂಕಗಳಿಗೆ ಸಮಾನ ಅಥವಾ ಹೆಚ್ಚಿನ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳನ್ನು ಮಾತ್ರ ಪರಿಗಣಿಸಿಕೊಂಡು ಸಾಮಾನ್ಯ/ಪಾವತಿ ವರ್ಗದಡಿ ಪ್ರವೇಶಾತಿ ಮಾಡಲಾಗುವುದು.
5. ವಿಭಾಗಗಳಲ್ಲಿ ಸೀಟುಗಳು ಲಭ್ಯವಿದ್ದಲ್ಲಿ ಇತರೆ ಅರ್ಹ ವಿದ್ಯಾರ್ಥಿಗಳಿಗೆ ಅವಕಾಶ ನೀಡಲಾಗುವುದು. ಆಸಕ್ತರು ಇದರ ಸದುಪಯೋಗವನ್ನು ಪಡೆಯುವಂತೆ ಈ ಮೂಲಕ ತಿಳಿಸಲಾಗಿದೆ.

ಪ್ರವೇಶಾತಿ ಅರ್ಜಿ ಶುಲ್ಕ ರೂ.100/- (ಪ.ಜಾ/ ಪ.ಪಂ/ ಪ್ರವರ್ಗ-1 : ರೂ.50/-). ಪ್ರತಿ ಕಾರ್ಯಕ್ರಮಕ್ಕೂ ಅರ್ಜಿದಾರರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಬೇಕು. ಪ್ರತಿ ಹೆಚ್ಚುವರಿ ಕಾರ್ಯಕ್ರಮಗಳಿಗೆ ಅರ್ಜಿ ಶುಲ್ಕ ತಲಾ ರೂ.100/- ರಂತೆ ಪಾವತಿಸುವುದು. ಅಂಚೆ ಮೂಲಕ ಅರ್ಜಿಗಳನ್ನು ಪಡೆಯುವ ವಿದ್ಯಾರ್ಥಿಗಳು ಸ್ವ-ವಿಳಾಸವುಳ್ಳ ಲಕೋಟೆಯೊಂದಿಗೆ ಹೆಚ್ಚುವರಿಯಾಗಿ ರೂ.50/-ನ್ನು ಪಾವತಿಸುವುದು. ಅರ್ಜಿ ಶುಲ್ಕವನ್ನು ಚಲನ್/ಡಿ.ಡಿ. (ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ) ಮೂಲಕ ಪಾವತಿಸುವುದು ಅಥವಾ ವಿಶ್ವವಿದ್ಯಾನಿಲಯ ಜಾಲತಾಣದಲ್ಲಿ ಲಭ್ಯವಿರುವ Online link (Term fee for PG department 002-point 14 Application fee) ಬಳಸಿ ಶುಲ್ಕ ಪಾವತಿಸುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಬಹುದು. ಭರ್ತಿ ಮಾಡಿದ ಅರ್ಜಿ ಹಾಗೂ ಅಗತ್ಯ ದಾಖಲೆಗಳನ್ನು ಸಂಬಂಧಪಟ್ಟ ಅಧ್ಯಕ್ಷರು/ಸಂಯೋಜಕರು/ಪ್ರಾಂಶುಪಾಲರಿಗೆ ದಿನಾಂಕ 07/02/2022 ರೊಳಗಾಗಿ ಸಲ್ಲಿಸುವುದು.

ವಿವರವಾದ ಮಾಹಿತಿಗಳನ್ನು ವಿಶ್ವವಿದ್ಯಾನಿಲಯದ ಜಾಲತಾಣ www.mangaloreuniversity.ac.in ನಿಂದ ಪಡೆದುಕೊಳ್ಳಬಹುದು.

ಕುಲಸಚಿವರು
~~~~~~~~~